ಕರ್ನಾಟಕ ವಿಧಾನ ಸಭೆ

KARNATAKA LEGISLATIVE ASSEMBLY

ಶುಕ್ರವಾರ, ದಿನಾಂಕ ೨೭ನೇ ಮಾರ್ಚ್ ೧೯೮೭/ಚೈತ್ರ ೬, ೧೯೦೯ ಶಕ

ಸದನವು ವಿಧಾನಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ ೧೨-೦೫ ಗಂಟೆಗೆ ಸಮವೇಶಗೊಂಡಿತು.

[ಅಧ್ಯಕ್ಷರು (ಶ್ರೀ ಬಿ.ಜಿ. ಬಣಕಾರ್) ಅವರು ಪೀಠವನ್ನು ಅಲಂಕರಿಸಿದ್ದರು]

ಶಾಸನ ರಚನಾ ಕಾರ್ಯಕಲಾಪಗಳು

1987ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶಗಳಿಗೆ ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ಎರಡನೇ ತಿದ್ದುಪಡಿ) ವಿಧೇಯಕ.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).— (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ). —ಮಾನ್ಯ ಅಧ್ಯಕ್ಷರೇ, ೧೯೮೭ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶಗಳಿಗೆ ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ೧೯೮೭ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶಗಳಿಗೆ ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).— ಮಾನ್ಯ ಅಧ್ಯಕ್ಷರೇ ೧೯೮೭ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರದೇಶಗಳಿಗೆ ಬಳಕೆ ಉಪಯೋಗ ಅಥವಾ ಮಾರಾಟಕ್ಕಾಗಿ ಬರುವ ಸರಕುಗಳ ಮೇಲೆ ತೆರಿಗೆ ವಿಧಿಸುವ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.*

---

* Annexure I